# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ:– 30–10–2021 ರಂದು ಬೆಳಗ್ಗೆ:– 11.30 ಗಂಟೆಗೆ ಶ್ರೀ. ಶ್ರೀ ಶಿವಕುಮಾರ ಸ್ವಾಮೀಜಿ ಸಾರ್ವಜನಿಕ ಸೇವಾ ಸಂಕೀರ್ಣ ವಾರ್ಡ್ ಸಂಖ್ಯೆ 126 ಮಾರುತಿಮಂದಿರದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.**

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿ.ಆರ್/35/2020–21/21–09–2020ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ. ಜಯಶಂಕರ್ ರೆಡ್ಡಿ, ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಸೌಕರ್ಯ, ಮಹದೇವಪುರ ವಿಭಾಗ, ಬಿ.ಬಿ.ಎಂ.ಪಿ ರವರನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾದಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿಗಳು ಮತ್ತು ಸದಸ್ಯರು:–**

| ಕ್ರ. ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ನೋಡೆಲ್ ಅಧಿಕಾರಿ: ಶ್ರೀ. ಜಯಶಂಕರ್ ರೆಡ್ಡಿ, ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಸೌಕರ್ಯ, ಮಹದೇವಪುರ ವಿಭಾಗ, ಬಿ.ಬಿ.ಎಂ.ಪಿ. | 9741697632 |
| 2 | ಕಾರ್ಯದರ್ಶಿ ಮತ್ತು ಸಂಚಾಲಕರು<br>ಶ್ರೀ. ರವಿರಾಜ್ ಎಸ್. ಪಿ, ಸಹಾಯಕ ಅಭಿಯಂತರರು, ವಾರ್ಡ್ ನಂ.126 | 9980764000 |
| 3 | ಶ್ರೀ. ತಿಮ್ಮಪ್ಪ, RI- Ward no.126, Maruthimandira. | 9480685657 |
| 4 | ಶ್ರೀ. ಲಕ್ಷ್ಮಿ ನರಸಿಂಹಯ್ಯ, ತೋಟಗಾರಿಕೆ ಅಧಿಕಾರಿ, ಚಂದ್ರಾಬಡಾವಣೆ. | 9845257299 |
| 5 | ಶ್ರೀ. ರಂಗದಾಮಯ್ಯ, ಕಾರ್ಯ ನಿರ್ವಾಹಕರು, ಮಾರುತಿಮಂದಿರ. | 9880376090 |
| 6 | ಶ್ರೀಮತಿ. ಹೇಮಾವತಿ. ಹೆಚ್. ಜಿ, ಹಿರಿಯ ಆರೋಗ್ಯ ಪರಿವೀಕ್ಷಕರು. | 9480484746 |
| 7 | ಶ್ರೀಮತಿ. ಮಾಲತಿ, ಆರೋಗ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಮೂಡಲಪಾಳ್ಯ. | 9632112539 |
| 8 | ಶ್ರೀ. ಟಿ. ರಾಮು, (RWA – MRCR Layout)- ಸದಸ್ಯರು | 9900709101 |
| 9 | ಶ್ರೀಮತಿ. ರೇವತಿ. ಎಮ್– ಸಾರ್ವಜನಿಕರು | 9632112539 |
| 10 | ಶ್ರೀ. ಶಿವಶಂಕರ್. ಎ. ಎಂ. (RWA – Vinayaka Layout)- ಸದಸ್ಯರು | 9448055204 |
| 11 | ಶ್ರೀ. ಸಂತೋಷ್ ಕುಮಾರ್–ಸಾರ್ವಜನಿಕರು | 8050741006 |

*****

ದಿನಾಂಕ: 30–10–2021 ರಂದು ಬೆಳಿಗ್ಗೆ 11.30 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

**ಚರ್ಚಿಸಲಾದ ವಿಷಯಗಳ ವಿವರಗಳು:–**

1. ಶ್ರೀ. ಟಿ. ರಾಮು– ಸಿದ್ದೇಶ್ವರನಗರ (RWA- MRCR Layout) ರವರು ಮಾತನಾಡುತ್ತಾ,
   - ವಾರ್ಡ್ ವ್ಯಾಪ್ತಿಯಲ್ಲಿ ಸಿ.ಸಿ.ಟಿ.ವಿ ಕ್ಯಾಮರಾ ಅಳವಡಿಕೆ ವಿವರಗಳನ್ನು ನೀಡಲು ಕೋರಿದರು.
   - 20ನೇ ಅಡ್ಡರಸ್ತೆ, 21ನೇ ಮುಖ್ಯರಸ್ತೆ ಕೆ.ಹೆಚ್.ಬಿ ಕ್ವಾಟ್ರಸ್‌ನಲ್ಲಿ ರಸ್ತೆ ಬದಿಯ ದಾರಿದೀಪವು ಮುರಿದಿದ್ದು ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ಇದನ್ನು ಈ ಕೂಡಲೇ ಸರಿಪಡಿಸಲು ಸೂಚಿಸಿದರು.

     <u>**ಕ್ರಮ:**</u> ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಲೆಕ್ಟ್ರಿಕಲ್, ಬಿ.ಬಿ.ಎಂ.ಪಿ. (Ph.NO: 9738614818)
2. ಶ್ರೀ. ಶಿವಶಂಕರ್ (RWA- Vinayaka Layout) ರವರು ಮಾತನಾಡುತ್ತಾ,
   - ವಾರ್ಡ್ ವ್ಯಾಪ್ತಿಯಲ್ಲಿ ಕಳೆದ 2 ವರ್ಷಗಳ ಪಿ.ಓ.ಡಬ್ಲ್ಯೂ ಕಾಮಗಾರಿಗಳ ವಿವರಗಳನ್ನು ನೀಡಲು ಕೋರಿದರು.

     <u>**ಕ್ರಮ:**</u> ಸಹಾಯಕ ಅಭಿಯಂತರರು, ಮಾರುತಿಮಂದಿರ ವಾರ್ಡ್, ಬಿ.ಬಿ.ಎಂ.ಪಿ. (Ph.NO: 9980764000)
   - ಔಷಧಿ ಸಿಂಪಡಣೆ ನಿಗದಿ ಕ್ರಮಾನುಸಾರ ಕೈಗೊಳ್ಳುವ ಬಗ್ಗೆ ತಿಳಿಸಿದರು.

     <u>**ಕ್ರಮ:**</u> ಶ್ರೀಮತಿ. ಹೇಮಾವತಿ. ಹೆಚ್. ಜಿ, ಹಿರಿಯ ಆರೋಗ್ಯ ಪರಿವೀಕ್ಷಕರು. (Ph.NO: 9480484746)
3. ಶ್ರೀಮತಿ. ಮಾಲತಿ, ಆರೋಗ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ರವರು ಮಾತನಾಡುತ್ತಾ ಕೋವಿಡ್–19ರ ವ್ಯಾಕ್ಸಿನೇಷನ್ ತೆಗೆದುಕೊಳ್ಳದಿರುವವರ ಪ್ರತಿರೋಧದ ಬಗ್ಗೆ ಪ್ರಸ್ತಾಪಿಸಿದರು. (Ph.NO: 9632112539)
4. ನಂಜರಸಪ್ಪ ಕಾಲೋನಿಯಲ್ಲಿ ಕೇಬಲ್ ವೈರ್‌ಗಳು ಕೆಳ ಹಂತದಲ್ಲಿ ನೇತಾಡುತ್ತಿದ್ದು ಸಾರ್ವಜನಿಕರ ತಲೆಗೆ ತಗಲುವಂತಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಮತ್ತು ನಂಜರಸಪ್ಪ ಕಾಲೋನಿಯಲ್ಲಿ ಕರೆಂಟ್ ಪದೆಪದೆ ತೆಗೆಯುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಶ್ರೀ. ಸಂತೋಷ್ ಕುಮಾರ್–ಸಾರ್ವಜನಿಕರು ತಿಳಿಸಿದರು.

   <u>**ಕ್ರಮ:**</u> ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಬಿ.ಬಿ.ಎಂ.ಪಿ. (Ph.NO: 9449869137)
5. 5ನೇ ಎ ಅಡ್ಡರಸ್ತೆ, 2ನೇ ಬಿ ಅಡ್ಡರಸ್ತೆ, ಸುಬ್ಬಣ್ಣಗಾರ್ಡನ್‌ನಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಂದ ರಸ್ತೆ ಅಗೆದಿರುವುದನ್ನು ಮುಚ್ಚಲು ಮತ್ತು ಪೂಜಾ ಸ್ಟೋರ್ ರಸ್ತೆ ಬಳಿ ಸ್ಯಾನಿಟರಿ ತೊಂದರೆಯಿರುವುದನ್ನು ಸರಿಪಡಿಸಲು ಶ್ರೀ. ಸಂತೋಷ್ ಕುಮಾರ್–ಸಾರ್ವಜನಿಕರು ತಿಳಿಸಿದರು.

   <u>**ಕ್ರಮ:**</u> ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಬಿ.ಬಿ.ಎಂ.ಪಿ. (Ph.NO: 7026266677)

ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧ ಪಟ್ಟ ಇಲಾಖೆಗೆ ತಿಳಿಸಲು ನೋಡೆಲ್ ಅಧಿಕಾರಿಗಳು ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ನಂ.126 ರವರಿಗೆ ಸೂಚಿಸಲಾಯಿತು.

ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂದಪಟ್ಟ ಅಧಿಕಾರಿಗಳು ಕಳುಹಿಸಿಕೊಡಬಧಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ಸಂಖ್ಯೆ.126

ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ.126

<u>ಪ್ರತಿಯನ್ನು:</u>

1) ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
5) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.